# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 340 |
| ಸದಸ್ಯರ ಹೆಸರು | : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 07-07-2023 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮಾತೃ ವಂದನಾ (PMMVY) ಅಡಿಯಲ್ಲಿ ತಾಯಿ-ಮಗು ಆರೈಕೆಗೆ ಕೈಗೊಂಡಿರುವ ಆರೋಗ್ಯ ಸುಧಾರಣೆ ಕಾರ್ಯಕ್ರಮಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | **ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ:**ತಾಯಿ ಮತ್ತು ಮಗುವಿನ ಆರೋಗ್ಯ ಮತ್ತು ಪೌಷ್ಠಿಕಾಂಶವನ್ನು ಸುಧಾರಿಸಲು ಹಾಗೂ ವೇತನ ನಷ್ಟವೇನಾದರೂ ಆಗಿದ್ದರೆ ಅದಕ್ಕೆ ಪರಿಹಾರ ನೀಡಲು ಗರ್ಭಿಣಿ ಮತ್ತು ಬಾಣಂತಿಯರಿಗಾಗಿ ಹಣಕಾಸು ನೆರವು ನೀಡುವುದಾಗಿದೆ. **ಸೌಲಭ್ಯ:** ಮಹಿಳೆಯ ಮೊದಲ ಎರಡು ಜೀವಂತ ಮಕ್ಕಳಿಗೆ ಈ ಪ್ರಯೋಜನ ಲಭ್ಯವಾಗುತ್ತದೆ. ಆದರೆ ಎರಡನೇ ಮಗುವು ಹೆಣ್ಣು ಮಗುವಾಗಿರಬೇಕು. ಮೊದಲ ಮಗುವಿಗೆ ಎರಡು ಕಂತುಗಳಲ್ಲಿ ರೂ. 5,000.00 ಮೊತ್ತವನ್ನು ನೀಡಲಾಗುವುದು. ಎರಡನೇ ಮಗುವು ಹೆಣ್ಣು ಮಗುವಾಗಿರುವುದಕ್ಕೆ ಒಳಪಟ್ಟು, ರೂ. 6,000.00 ಗಳ ಪ್ರಯೋಜನವನ್ನು ಜನನದ ನಂತರ ಒಂದೇ ಕಂತಿನಲ್ಲಿ ನೀಡಲಾಗುವುದು. |
| ಆ. | ರಾಜ್ಯ ಸರ್ಕಾರಕ್ಕೆ ಈ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರ ಯಾವ ರೀತಿ ಮತ್ತು ಆಧಾರ ಹಾಗೂ ಯಾವ ಅನುಪಾತದಡಿ ಅನುದಾನವನ್ನು ಬಿಡುಗಡೆ ಮಾಡುತ್ತಿದೆ; (ಪೂರ್ಣ ವಿವರ ನೀಡುವುದು) | • ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರ ಅನುದಾನವನ್ನು PFMS ಮುಖಾಂತರ ಬಿಡುಗಡೆ ಮಾಡಲಾಗುತ್ತಿದೆ. ರಾಜ್ಯ ಸರ್ಕಾರದಿಂದ ನೇರ ನಗದು ವರ್ಗಾವಣೆ (DBT) ಮುಖಾಂತರ ಫಲಾನುಭವಿಗಳಿಗೆ ಹಣ ಪಾವತಿಸಲಾಗುವುದು.<br>• ಸದರಿ ಯೋಜನೆಯಡಿ ಕೇಂದ್ರ ಸರ್ಕಾರ ಶೇಕಡ 60 ರಷ್ಟು ಅನುದಾನ ಬಿಡುಗಡೆ ಮಾಡುತ್ತಿದ್ದು, ರಾಜ್ಯ ಸರ್ಕಾರ ಶೇಕಡ 40 ರಷ್ಟು ಅನುದಾನ ಬಿಡುಗಡೆ ಮಾಡುತ್ತಿದೆ. |
| ಇ. | ರಾಜ್ಯದಲ್ಲಿ ಈ ಯೋಜನೆ ಅನುಷ್ಠಾನಕ್ಕೆ ಬಳಸಲಾಗುತ್ತಿರುವ ತಂತ್ರಾಂಶ ಯಾವುವು; ಮತ್ತು ಈ ತಂತ್ರಾಂಶ ಬಳಕೆಗೆ ಸಂಬಂಧಿಸಿದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಅಗತ್ಯ ತರಬೇತಿ ನೀಡಲಾಗಿದೆಯೆ; (ಪೂರ್ಣ ವಿವರ ನೀಡುವುದು) | ವೆಬ್ ಆಧಾರಿತ ನಿರ್ವಹಣೆ ಮತ್ತು ಮಾಹಿತಿ ವ್ಯವಸ್ಥೆ ಸಾಫ್ಟ್ ವೇರ್ (ಪಿಎಂಎಂವಿವೈ-ಸಿಐಸ್‌ಎಸ್) 2.0 ಪೋರ್ಟಲ್‌ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ.<br><br>**DBT Bharat Portal:** https://dbtbharat.gov.in<br><br>ಕೇಂದ್ರ ಸರ್ಕಾರದಿಂದ ಸದರಿ ತಂತ್ರಾಂಶ ಬಳಕೆಗೆ ಸಂಬಂಧಿಸಿದಂತೆ "ತರಬೇತುದಾರರ ತರಬೇತಿ" (ToT) ಯನ್ನು ಇಲಾಖಾ ಅಧಿಕಾರಿಗಳಿಗೆ ನೀಡಲಾಗಿರುತ್ತದೆ.<br>ಮುಂದುವರೆದು ಜಿಲ್ಲೆಗಳಲ್ಲಿ PMMVY ಯೋಜನೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ತರಬೇತಿ ನೀಡಲಾಗುವುದು. |

| | | |
|---|---|---|
| ಈ. | ರಾಜ್ಯಕ್ಕೆ ಈ ಯೋಜನೆಗಳ ಅಡಿಯಲ್ಲಿ ಕೇಂದ್ರದಿಂದ ದೊರೆತಿರುವ ಅನುದಾನ ಎಷ್ಟು; ಮತ್ತು ಈ ಅನುದಾನ ಯಾವ ರೀತಿ ಬಳಸಿಕೊಳ್ಳಲಾಗಿದೆ? (ಪೂರ್ಣ ಮಾಹಿತಿ ನೀಡುವುದು) | 2022-2023ನೇ ಸಾಲಿನ ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿ ಕೇಂದ್ರದಿಂದ ಬಿಡುಗಡೆಯಾದ ಅನುದಾನ ವಿವರ ಈ ಕೆಳಕಂಡಂತಿದೆ.<br>(ರೂ. ಲಕ್ಷಗಳಲ್ಲಿ) |

| ಹಿಂದಿನ ಸಾಲಿನ ಉಳಿಕೆ ಅನುದಾನ | ಕೇಂದ್ರ ಸರ್ಕಾರದ ಅನುದಾನ | ಒಟ್ಟು ಲಭ್ಯವಿರುವ ಅನುದಾನ | ಫಲಾನುಭವಿಗಳಿಗೆ ಪಾವತಿಸಲಾದ ಅನುದಾನ |
|---|---|---|---|
| 7076.41 | 14887.38 | 21963.78 | 21010.06 |

**ಸಂಖ್ಯೆ: ಮಮಇ 116 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.